# All India Radio: Bangalore
# Regional Bulletin In Kannada
# 17.02.2026 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಕೋಲಾರದ ವೇಮಗಲ್‌ನಲ್ಲಿ ಪ್ರಧಾನಿ ಹಾಗೂ ಫ್ರಾನ್ಸ್ ಅಧ್ಯಕ್ಷರಿಂದ ಎಚ್-೧೨೫ ಹೆಲಿಕಾಪ್ಟರ್ ಘಟಕ ವರ್ಚುವಲ್ ಮೂಲಕ ಲೋಕಾರ್ಪಣೆ

೨. ಎಸ್‌ಎಸ್‌ಎಲ್‌ಸಿ-ಪಿಯುಸಿ ಪರೀಕ್ಷಾ ವೇಳಾಪಟ್ಟಿ ಪ್ರಕಟಿಸಿದ ಶಿಕ್ಷಣ ಸಚಿವ ಮಧುಬಂಗಾರಪ್ಪ

೩. ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಲೋಪದೋಷ; ರಾಜ್ಯ ಚುನಾವಣಾ ಆಯುಕ್ತರನ್ನು ಭೇಟಿ ಮಾಡಿದ ಉಪಮುಖ್ಯಮಂತ್ರಿ ನೇತೃತ್ವದ ನಿಯೋಗ

೪. ರಾಹುಲ್ ಗಾಂಧಿ ವಿರುದ್ಧ ಮಾನನಷ್ಟ ಮೊಕದ್ದಮೆ; ಪ್ರಕರಣ ರದ್ದುಗೊಳಿಸಿದ ಹೈಕೋರ್ಟ್

೫. ಎಐ ಆಧಾರಿತ ನೀರು ನಿರ್ವಹಣೆಯಲ್ಲಿ ಜಾಗತಿಕವಾಗಿ ಬೆಂಗಳೂರು ಜಲಮಂಡಳಿ ಮಾದರಿ; ಡಾ.ರಾಮ್ ಪ್ರಸಾತ್ ಮನೋಹರ್ ಪ್ರತಿಪಾದನೆ

****************

ಕೋಲಾರ ತಾಲೂಕಿನ ವೇಮಗಲ್ ಕೈಗಾರಿಕಾ ಪ್ರದೇಶದಲ್ಲಿ ಟಾಟಾ ಅಡ್ವಾನ್ಸಡ್ ಸಿಸ್ಟಮ್ಸ್ ಲಿಮಿಟೆಡ್‌ನ ಏರ್‌ಬಸ್ ಎಚ್-೧೨೫ ಹೆಲಿಕಾಪ್ಟರ್‌ನ ಅಂತಿಮ ಜೋಡಣಾ ಘಟಕವನ್ನು ಪ್ರಧಾನಿ ನರೇಂದ್ರ ಮೋದಿ ಹಾಗೂ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ವರ್ಚುವಲ್ ಮೂಲಕ ಇಂದು ಲೋಕಾರ್ಪಣೆಗೊಳಿಸಿದರು.

ಇದೇ ವೇಳೆ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ -ಫ್ರಾನ್ಸ್ ಸಹಭಾಗಿತ್ವದಲ್ಲಿ ಆರಂಭಗೊಂಡಿರುವ ಈ ಹೆಲಿಕಾಪ್ಟರ್ ಮೌಂಟ್ ಎವರೆಸ್ಟ್ ಮೇಲೆ ಹಾರಾಟ ಮಾಡಲು ಶಕ್ತವಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ; ಪ್ರಧಾನಿ ನರೇಂದ್ರ ಮೋದಿ

ಈ ವೇಳೆ ವೇಮಗಲ್‌ನ ಹೆಲಿಕಾಪ್ಟರ್ ಘಟಕದಲ್ಲಿ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಾಗೂ ಫ್ರಾನ್ಸ್ ರಕ್ಷಣಾ ಸಚಿವೆ ಕ್ಯಾಥರಿನ್ ವ್ಯಾಟ್ರಿನ್, ಕೇಂದ್ರ ಸಚಿವ ರಾಮ್‌ಮೋಹನ್ ನಾಯ್ಡು, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಉಪಸ್ಥಿತರಿದ್ದರು.

ಇದಕ್ಕೂ ಮೊದಲು ಮಾತನಾಡಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಮೇಕ್ ಇನ್ ಇಂಡಿಯಾ ಹಾಗೂ ಆತ್ಮನಿರ್ಭರ ಭಾರತದ ಫಲವಾಗಿ ಇಂದು ಈ ಘಟಕ ಆರಂಭಗೊಂಡಿದೆ ಎಂದು ತಿಳಿಸಿದ್ದಾರೆ.

ಭಾರತ ಇಂದು ರಕ್ಷಣಾ ವಲಯದ ರಫ್ತಿನಲ್ಲಿ ವಿಶ್ವದಲ್ಲೇ ಅಗ್ರಗಣ್ಯ ರಾಷ್ಟ್ರವಾಗಿ ಹೊರಹೊಮ್ಮಿದೆ. ವಿಶ್ವದ ಹಲವು ರಾಷ್ಟ್ರಗಳು, ಭಾರತದ ಎಮ್‌ಎಸ್‌ಎಮ್‌ಇಗಳೊಂದಿಗೆ ಉತ್ಪಾದನಾ ಕ್ಷೇತ್ರಗಳಲ್ಲಿ ಪಾಲುದಾರರಾಗಲು ಬಯಸುತ್ತಿದೆ ಎಂದು ಹೇಳಿದ್ದಾರೆ.

ಕೋಲಾರದಲ್ಲಿ ಎಚ್-೧೨೫ ಹೆಲಿಕಾಪ್ಟರ್ ಘಟಕದಿಂದ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಕೌಶಲ್ಯಯುಕ್ತ ಯುವಕರಿಗೆ ಉದ್ಯೋಗ ದೊರೆಯಲಿದೆ ಎಂದು ತಿಳಿಸಿದ್ದಾರೆ.

ಟಾಟಾ ಅಡ್ವಾನ್ಸಡ್ ಸಿಸ್ಟಮ್ಸ್ ಲಿಮಿಟೆಡ್‌ನ ಏರ್‌ಬಸ್ ಎಚ್-೧೨೫ ಸಿಂಗಲ್ ಎಂಜಿನ್ ಹೆಲಿಕಾಪ್ಟರ್ ವಿಶ್ವದಲ್ಲೇ ನಂಬಿಕಾರ್ಹ ಹೆಲಿಕಾಪ್ಟರ್ ಆಗಿ ಹೊರಹೊಮ್ಮಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ: ರಾಜನಾಥ್ ಸಿಂಗ್

****************

ಇದೇ ೨೮ ರಿಂದ ಮಾರ್ಚ್ ೧೭ರವರೆಗೆ ದ್ವಿತಿಯ ಪಿಯುಸಿ ಹಾಗೂ ಮಾರ್ಚ್ ೧೮ ರಿಂದ ಏಪ್ರಿಲ್ ೨ರವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ನಡೆಯಲಿವೆ. ಶಿಕ್ಷಣ ಸಚಿವ ಮಧು ಬಂಗಾರಪ್ಪ ಇಂದು ವೇಳಾಪಟ್ಟಿಯನ್ನು ಪ್ರಕಟಿಸಿದ್ದಾರೆ.

ದ್ವಿತಿಯ ಪಿಯುಸಿ ಪರೀಕ್ಷೆ ಬೆಳಗ್ಗೆ ೧೦ ರಿಂದ ಮಧ್ಯಾಹ್ನ ೧ ರವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬೆಳಗ್ಗೆ ೧೦ ರಿಂದ ಮಧ್ಯಾಹ್ನ ೧.೧೫ ರವರೆಗೆ ನಡೆಯಲಿದೆ.

ಈ ಬಾರಿ  ೭ ಲಕ್ಷ ೧೦ ಸಾವಿರದ ೩೬೩ ವಿದ್ಯಾರ್ಥಿಗಳು ಪಿಯುಸಿಗೆ ಹಾಗೂ ಎಸ್‌ಎಸ್‌ಎಲ್‌ಸಿಗೆ ೯ ಲಕ್ಷ ೨ ಸಾವಿರದ ೮೮೯ ವಿದ್ಯಾರ್ಥಿಗಳು ಪರೀಕ್ಷೆಗೆ ಹೆಸರು ನೋಂದಾಯಿಸಿಕೊಂಡಿದ್ದಾರೆ.

****************

ಗ್ರೇಟರ್ ಬೆಂಗಳೂರು ಪ್ರಾಧಿಕಾರ-ಜಿಬಿಎ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆ ಹಿನ್ನೆಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿನ ಲೋಪದೋಷ ಸರಿಪಡಿಸುವಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಬೆಂಗಳೂರು ಸಚಿವರು, ಶಾಸಕರನ್ನು ಒಳಗೊಂಡ ನಿಯೋಗವು, ರಾಜ್ಯ ಚುನಾವಣಾ ಆಯುಕ್ತ ಜಿ ಎಸ್ ಸಂಗ್ರೇಶಿ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿತು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಮಯ ಬಂದಾಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಹೈಕಮಾಂಡ್ ತೀರ್ಮಾನದ ಬಗ್ಗೆ ಸಂದೇಶ ನೀಡಲಿದ್ದಾರೆ. ಮುಖ್ಯಮಂತ್ರಿ ಹಾಗೂ ತಮ್ಮ ನಡುವೆ ಗುಟ್ಟಿನ ವ್ಯವಹಾರ ನಡೆದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಇದೇ ವೇಳೆ, ಶಾಸಕರ ವಿದೇಶ ಪ್ರವಾಸದ ಬಗ್ಗೆ ಮಾಹಿತಿ ಇಲ್ಲ ಎಂದು ಹೇಳಿದ್ದಾರೆ.

****************

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧದ ಮಾನನಷ್ಟ ಮೊಕದ್ದಮೆಯನ್ನು ರಾಜ್ಯ ಹೈಕೋರ್ಟ್ ರದ್ದುಗೊಳಿಸಿದೆ.

ವಿಧಾನಸಭಾ ಚುನಾವಣೆಯ ಸಮಯದಲ್ಲಿ ಹಿಂದಿನ ಬಿಜೆಪಿ ಸರ್ಕಾರವನ್ನು ಗುರಿಯಾಗಿಸಿಕೊಂಡು ಭ್ರಷ್ಟಾಚಾರ ದರ ಕಾರ್ಡ್ ಜಾಹಿರಾತು ನೀಡಿದ ಹಿನ್ನೆಲೆಯಲ್ಲಿ ಬಿಜೆಪಿ ರಾಹುಲ್ ಗಾಂಧಿ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಿತ್ತು.

ಇದರ ವಿಚಾರಣೆ ನಡೆಸಿದ ಉಚ್ಚ ನ್ಯಾಯಾಲಯ ವಿಚಾರಣೆ ಮುಂದುವರಿಸಲು ಅವಕಾಶ ನೀಡುವುದು, ಕಾನೂನು ಪ್ರಕ್ರಿಯೆಯ ದುರಪಯೋಗವಾಗಲಿದೆ ಎಂದು ಅಭಿಪ್ರಾಯಪಟ್ಟಿದೆ.

****************

ಕೃತಕ ಬುದ್ಧಿಮತ್ತೆ ಆಧಾರಿತ ನೀರು ನಿರ್ವಹಣೆಯಲ್ಲಿ ಬೆಂಗಳೂರು ಜಲಮಂಡಳಿ ಜಾಗತಿಕ ಮಟ್ಟದಲ್ಲಿ ಮಾದರಿಯಾಗಿ ಹೊರಹೊಮ್ಮಿದೆ ಎಂದು ಬೆಂಗಳೂರು ಜಲಮಂಡಳಿ ಅಧ್ಯಕ್ಷ ಡಾ.ವಿ.ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ನವದೆಹಲಿಯಲ್ಲಿ ನಡೆದ ಎಐ ಇಂಪ್ಯಾಕ್ಟ್ ಶೃಂಗಸಭೆ-೨೦೨೬ ರ ಮಾಡೆಲ್ ಟು ಮಾಸೆಸ್ ಹವಾಮಾನ ವೈಪರಿತ್ಯ ಎದುರಿಸಲು ಎಐ ಬಳಕೆ ಎಂಬ ಸಂವಾದದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಎಐ

ಬಳಕೆಯಿಂದ ಪಂಪಿಂಗ್ ಸ್ಟೇಷನ್‌ಗಳಲ್ಲಿ ವಾರ್ಷಿಕ ೪೦ ಕೋಟಿ ರೂಪಾಯಿ ವಿದ್ಯುತ್ ಉಳಿತಾಯವಾಗಿದೆ ಎಂದು ಹೇಳಿದ್ದಾರೆ.

ಇಂಗಾಲದ ಹೊರಸೂಸುವಿಕೆಯನ್ನು ತಗ್ಗಿಸುವ ಮೂಲಕ ಪರಿಸರಕ್ಕೂ ಕೊಡುಗೆ ನೀಡಲಾಗಿದೆ ಎಂದು ವಿವರಿಸಿದ್ದಾರೆ.

ಬೆಂಗಳೂರಿನಲ್ಲಿ ನೀರು ಸೋರಿಕೆ ಪತ್ತೆ ಹಚ್ಚಲು ಮತ್ತು ಅನಧಿಕೃತ ಸಂಪರ್ಕಗಳನ್ನು ನಿಖರವಾಗಿ ಗುರುತಿಸಲು ಕೃತಕಬುದ್ಧಿಮತ್ತೆ ಚಾಲಿತ ರೋಬೋಟಿಕ್ಸ್ ಬಳಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

****************

ಮಹಿಳೆಯರಿಗೆ ಸುರಕ್ಷತೆ ಒದಗಿಸುವ ಹಿನ್ನೆಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ನಿರ್ಭಯ ಯೋಜನೆಯಡಿ ಮತ್ತು ಪೊಲೀಸ್ ಇಲಾಖೆಯ ಮಹಿಳಾ ಸಿಬ್ಬಂದಿಯಿಂದ ರಚಿಸಲ್ಪಟ್ಟ ಅಕ್ಕ ಪಡೆಗೆ ಬೆಳಗಾವಿಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಮಹಿಳೆ ಮತ್ತು ಮಕ್ಕಳ ಮೇಲೆ ವಿವಿಧ ರೀತಿಯ ದೌರ್ಜನ್ಯಗಳು ನಡೆಯುತ್ತಿದ್ದು, ಅವುಗಳನ್ನು ಬೇರುಸಹಿತ ನಿರ್ಮೂಲನೆಗೊಳಿಸುವ ಗುರುತರ ಉದ್ದೇಶದಿಂದ ಅಕ್ಕಪಡೆ ನಿರ್ಮಿಸಲಾಗಿದೆ ಎಂದು ತಿಳಿಸಿದರು.

ಇದಕ್ಕೂ ಮೊದಲು ಬೀದರ್ ಹಾಗೂ ಬೆಳಗಾವಿ ಜಿಲ್ಲೆಗಳ ತರಬೇತಿ ಪಡೆದ ಅಕ್ಕ ಪಡೆಯ ಮಹಿಳಾ ಪೊಲೀಸ್ ಸಿಬ್ಬಂದಿ ಸ್ವಯಂ ಸಂರಕ್ಷಣಾ ವಿಧಾನಗಳ ಬಗ್ಗೆ ನೀಡಿದ ಪ್ರಾತ್ಯಕ್ಷಿಕೆ ಸಾರ್ವಜನಿಕರ ಗಮನ ಸೆಳೆಯಿತು.

****************

ರಾಜ್ಯದ ನಾಲ್ಕು ಪ್ರಮುಖ ಎಕ್ಸ್‌ಪ್ರೆಸ್ ರೈಲುಗಳು ಇಂದಿನಿಂದ ನಾಯಂಡಹಳ್ಳಿ ರೈಲು ನಿಲ್ದಾಣದಲ್ಲಿ ಹೆಚ್ಚುವರಿ ನಿಲುಗಡೆ ಮಾಡಲಿವೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ.

ನಾಯಂಡಹಳ್ಳಿ ರೈಲ್ವೆ ನಿಲ್ದಾಣದಲ್ಲಿ ಹೆಚ್ಚುವರಿ ನಿಲ್ದಾಣ ರೈಲುಗಳಿಗೆ ಹಸಿರು ನಿಶಾನೆ ತೋರಿ, ಮಾತನಾಡಿದ ಅವರು ಮೈಸೂರು-ಕೆಎಸ್‌ಆರ್ ಬೆಂಗಳೂರು ಸಿಟಿ ಚಾಮುಂಡಿ ಎಕ್ಸ್‌ಪ್ರೆಸ್, ಮೈಸೂರು-ಬಾಗಲಕೋಟೆ ಬಸವ ಎಕ್ಸ್‌ಪ್ರೆಸ್, ತೂತ್ತುಕುಡಿ-ಮೈಸೂರು ಎಕ್ಸ್‌ಪ್ರೆಸ್ ಮತ್ತು ಮೈಸೂರು-ಪಂಡರಾಪುರ- ಗೋಲ್ ಗುಂಬಜ್ ಎಕ್ಸ್‌ಪ್ರೆಸ್ ರೈಲುಗಳಿಗೆ ನಾಯಂಡಹಳ್ಳಿ ರೈಲು ನಿಲ್ದಾಣದಲ್ಲಿ ಹೆಚ್ಚುವರಿ ನಿಲುಗಡೆಗೆ ರೈಲ್ವೆ ಇಲಾಖೆ ಒಪ್ಪಿಗೆ ಸೂಚಿಸಿದೆ ಎಂದು ಅವರು ಹೇಳಿದ್ದಾರೆ.

****************

ವಿಜಯಪುರ ಜಿಲ್ಲೆಯಲ್ಲಿ ಇಲಾಖಾವಾರು ನಿಗದಿಪಡಿಸಿದ ಅನುದಾನವನ್ನು ಮುಂಬರುವ ಸಭೆಯೊಳಗಾಗಿ ನೂರರಷ್ಟು ಪ್ರಗತಿ ಸಾಧಿಸಿ ವರದಿ ನೀಡುವಂತೆ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಪ್ರಸಕ್ತ ವರ್ಷದಲ್ಲಿ ನಿಗದಿಪಡಿಸಿದ ಅನುದಾನವನ್ನು ಭೌತಿಕ ಹಾಗೂ ಆರ್ಥಿಕ ಗುರಿಗೆ ಅನುಗುಣವಾಗಿ ಸಮರ್ಪಕವಾಗಿ ಬಳಸಿ ಬಾಕಿ ಇರುವ ಯೋಜನೆಗಳನ್ನು ಪೂರ್ಣಗೊಳಿಸಬೇಕು ಎಂದು ತಿಳಿಸಿದ್ದಾರೆ.

ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಿ ವರದಿ ನೀಡಬೇಕು ಎಂದು ನಿರ್ದೇಶನ ನೀಡಿದ್ದಾರೆ.

****************

ಪ್ರೇಮಿಗಳ ದಿನಾಚರಣೆ ಹಿನ್ನಲೆಯಲ್ಲಿ ದೇವನಹಳ್ಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಈ ಬಾರಿ ೬೦ ದಶಲಕ್ಷಕ್ಕಿಂತಲೂ ಹೆಚ್ಚು ಗುಲಾಬಿ ರಫ್ತು ಮಾಡುವ ಮೂಲಕ ಗಮನಾರ್ಹ ಸಾಧನೆ ಮಾಡಿದೆ.

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ೨೬ ಅಂತಾರಾಷ್ಟ್ರೀಯ ಮತ್ತು ೪೭ ದೇಶೀಯ ತಾಣಗಳಿಗೆ ಸುಮಾರು ೬೦ ದಶಲಕ್ಷ ಗುಲಾಬಿ ಹೂವುಗಳನ್ನು ರವಾನಿಸಿದೆ. ೨ ಸಾವಿರದ ೭೦೦ ಮೆಟ್ರಿಕ್ ಟನ್‌ಗಿಂತಲೂ ಅಧಿಕ ತೂಕದ ಹೂವುಗಳ ರಫ್ತು ಮಾಡಲಾಗಿದೆ.

ಕಳೆದ ವರ್ಷಕ್ಕೆ ಹೋಲಿಸಿದರೆ ಹೂವುಗಳ ಸಂಖ್ಯೆಯಲ್ಲಿ ಶೇಕಡ ೩೮ ರಷ್ಟು ಮತ್ತು ಒಟ್ಟು ತೂಕದಲ್ಲಿ ಶೇಕಡ ೬೪ ರಷ್ಟು ಬೆಳವಣಿಗೆಯನ್ನು ಕಂಡಿದೆ ಎಂದು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಪ್ರಕಟಣೆ ತಿಳಿಸಿದೆ.

****************

ಲಖ್ನೋದ ಏಕಾನ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಕ್ರಿಕೆಟ್‌ನ ಸೆಮಿಫೈನಲ್ ಪಂದ್ಯದಲ್ಲಿ ಕರ್ನಾಟಕ ತಂಡ ಬೃಹತ್ ಮೊತ್ತ ದಾಖಲಿಸಿದೆ.

ಮೂರನೇ ದಿನದಾಟದಲ್ಲಿ ಕರ್ನಾಟಕ ನೀಡಿರುವ ೭೩೭ ಬೃಹತ್ ರನ್‌ಗಳ ಗುರಿ ಬೆನ್ನತ್ತಿರುವ ಉತ್ತರಾಖಂಡ್ ದಿನದಾಟದ ಅಂತ್ಯಕ್ಕೆ ೫ ವಿಕೆಟ್ ಕಳೆದುಕೊಂಡು, ೧೪೯ ರನ್‌ಗಳಿಸಿದೆ. ಕರ್ನಾಟಕ ೫೮೭ ರನ್‌ಗಳ ಮುನ್ನಡೆ ಪಡೆದುಕೊಂಡಿದೆ.

ಕರ್ನಾಟಕ ತಂಡ, ಉತ್ತರಾಖಂಡ್ ತಂಡವನ್ನು ಅಲೌಟ್ ಮಾಡಿದರೆ ಮಾತ್ರ ಫೈನಲ್‌ಗೆ ಪ್ರವೇಶಿಸಲಿದೆ.

********ಮುಕ್ತಾಯ********